**ಕರ್ನಾಟಕ ಸರ್ಕಾರದ ನಡಾವಳಿಗಳು**

**ವಿಷಯ:** 2022-23ನೇ ಸಾಲಿನ ಎಸ್.ಎಸ್.ಎಲ್.ಸಿ ಪೂರ್ವ ಸಿದ್ಧತಾ ಪರೀಕ್ಷೆಯನ್ನು ನಡೆಸುವ ಕುರಿತು.

**ಓದಲಾಗಿದೆ:**
1. ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯ, ಏಕಕಡತ ಸಂಖ್ಯೆ:ಎ8/ಎಸ್‌ಎಸ್‌ಎಲ್‌ಸಿ/ಪೂ.ಸಿ.ಪ/ 45/2021-22, ದಿನಾಂಕ:01.10.2023.
2. ಸರ್ಕಾರದ ಆದೇಶ ಸಂಖ್ಯೆ:ಇಡಿ 302 ಎಸ್‌ಎಲ್‌ಬಿ 2017, ದಿನಾಂಕ: 28.01.2019.
3. ಸರ್ಕಾರದ ಆದೇಶ ಸಂಖ್ಯೆ:ಇಪಿ 197 ಎಸ್‌ಎಲ್‌ಬಿ 2021, ದಿನಾಂಕ: 04.12.2021.
4. ಸರ್ಕಾರದ ಆದೇಶ ಸಂಖ್ಯೆ: ಇಪಿ 197 ಎಸ್‌ಎಲ್‌ಬಿ 2021, ದಿನಾಂಕ: 25.01.2023.
5. ಮಾನ್ಯ ಇಲಾಖಾ ಸಚಿವರ ಟಿಪ್ಪಣಿ ಸಂಖ್ಯೆ:ಪ್ರಾ.ಪ್ರೌ.ಸ.ಸ/73/ 212023, ದಿನಾಂಕ:13.02.2023.

Noted
17/2/23

*****

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ಆದೇಶದಲ್ಲಿ 2022-23 ನೇ ಸಾಲಿನ ಎಸ್.ಎಸ್.ಎಲ್.ಸಿ ಪೂರ್ವ ಸಿದ್ಧತಾ ಪರೀಕ್ಷೆಗೆ ಸಂಬಂಧಿಸಿದಂತೆ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯಿಂದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಲಾಗಿನ್‌ಗೆ ಮಾದರಿ ಪ್ರಶ್ನೆ ಪತ್ರಿಕೆಯನ್ನು ಅಪ್‌ಲೋಡ್ ಮಾಡುವುದು ಮತ್ತು 2023 ರ ಮಾಹೆಯಲ್ಲಿ ಪರೀಕ್ಷೆ ನಡೆಸುವಂತೆ ವೇಳಾ ಪಟ್ಟಿಯನ್ನು ಪ್ರಕಟಿಸುವುದು. ಹಾಗೂ ಮಂಡಲಿಯಿಂದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಲಾಗಿನ್‌ಗೆ ಅಪ್‌ಲೋಡ್ ಮಾಡಲಾದ ಮಾದರಿ ಪ್ರಶ್ನೆಪತ್ರಿಕೆಯಂತೆ ತಮ್ಮ ಹಂತದಲ್ಲಿ ಪ್ರಶ್ನೆಪತ್ರಿಕೆಯನ್ನು ಸಿದ್ಧಪಡಿಸಿಕೊಂಡು, ಸದರಿ ಪ್ರಶ್ನೆಪತ್ರಿಕೆಗಳನ್ನು ತಾಲ್ಲೂಕು ಹಂತದ ಸ್ಟ್ರಾಂಗ್ ರೂಂನಲ್ಲಿ ಸುರಕ್ಷಿತವಾಗಿಟ್ಟು, ಆಯಾ ವಿಷಯದ ಪರೀಕ್ಷಾ ದಿನದಂದು ಶಾಲೆಗಳಿಗೆ ವಿತರಿಸಿ, ಒಟ್ಟಾರೆ ಪೂರ್ವ ಸಿದ್ಧತಾ ಪರೀಕ್ಷೆಯನ್ನು ಜಿಲ್ಲಾ ಉಪನಿರ್ದೇಶಕರ ನೇತೃತ್ವದಲ್ಲಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿ ಗೌಪ್ಯತೆ ಮತ್ತು ಸುರಕ್ಷತೆಯೊಂದಿಗೆ ಸುಲಲಿತವಾಗಿ ನಡೆಸಲು ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಅನುಮತಿಸಲಾಗಿರುತ್ತದೆ. ಹಾಗೆಯೇ ಸದರಿ ಪೂರ್ವ ಸಿದ್ಧತಾ ಪರೀಕ್ಷೆಗೆ ಪ್ರತಿ ವಿದ್ಯಾರ್ಥಿಗೆ ರೂ.60/- (ಅರವತ್ತು ರೂಪಾಯಿ ಮಾತ್ರ) ರಂತೆ ಪರೀಕ್ಷಾ ಶುಲ್ಕವನ್ನು ನಿಗಧಿಪಡಿಸಿದೆ. ವಿದ್ಯಾರ್ಥಿಗಳಿಂದ ಪಡೆದ ಪರೀಕ್ಷಾ ಶುಲ್ಕವನ್ನು ಸಂಬಂಧಿಸಿದ ಶಾಲಾ ಮುಖ್ಯೋಪಾಧ್ಯಾಯರು ಆಯಾ ಕ್ಷೇತ ಶಿಕ್ಷಣಾಧಿಕಾರಿಗಳ ಬ್ಯಾಂಕ್ ಖಾತೆಗೆ ಜಮ ಮಾಡುವುದು. ಕ್ಷೇತ್ರ ಶಿಕ್ಷಣಾಧಿಕಾರಿಗಳು ಪರೀಕ್ಷಾ ಶುಲ್ಕ ಸ್ವೀಕರಿಸಿದ ಮತ್ತು ಪರೀಕ್ಷಾ ಖರ್ಚು ವೆಚ್ಚಗಳ ಕುರಿತು ಲೆಕ್ಕಪತ್ರ ನಿರ್ವಹಿಸಿ ತಪಾಸಣಾ ಸಮಯದಲ್ಲಿ ಹಾಜರುಪಡಿಸುವಂತೆ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರ ಟಿಪ್ಪಣಿಯಲ್ಲಿ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಪೂರ್ವಾಭಾವಿ ಪರೀಕ್ಷೆಯನ್ನು ನಡೆಸುತ್ತಿದ್ದು, ಈ ಕೆಳಕಂಡ ಬದಲಾವಣೆಗಳನ್ನು

ಒಳಗೊಂಡಂತೆ ಪೂರ್ವಾಭಾವಿ ಪರೀಕ್ಷೆಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಿಂದ ಪ್ರಶ್ನೆ ಪತ್ರಿಕೆಗಳನ್ನು ಸಿದ್ಧಪಡಿಸುವುದರ ಬದಲಾಗಿ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಹಂತದಲ್ಲಿ ವಾರ್ಷಿಕ ಪರೀಕ್ಷೆಯ ಮಾದರಿಯಲ್ಲಿ ಪ್ರಶ್ನೆ ಪತ್ರಿಕೆಗಳನ್ನು ಸಿದ್ಧಪಡಿಸಿ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಲಾಗಿನ್‌ಗೆ ಕಳುಹಿಸಲು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿ ಮುದ್ರಿಸಿ, ಪೂರ್ವಭಾವಿ ಪರೀಕ್ಷೆಗಳನ್ನು ನಡೆಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಹಾಗೂ ಪ್ರತಿ ವಿದ್ಯಾರ್ಥಿಯಿಂದ ರೂ.60/- ಬದಲಾಗಿ ರೂ.50/- ಅನ್ನು ಸಂಗ್ರಹಿಸುವ ಕುರಿತು ಸೂಕ್ತ ಬದಲಾವಣೆಯನ್ನು ಮಾಡುವಂತೆ ಆದೇಶಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಪಿ 197 ಎಸ್‌ಎಲ್‌ಬಿ 2021,**
**ಬೆಂಗಳೂರು, ದಿನಾಂಕ: 17ನೇ ಫೆಬ್ರವರಿ 2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕ್ರಮ ಸಂಖ್ಯೆ (4) ರ ಸರ್ಕಾರದ ಸಂಖ್ಯೆ: ಇಪಿ 197 ಎಸ್‌ಎಲ್‌ಬಿ 2021, ದಿನಾಂಕ:25.01.2023 ರ ಆದೇಶವನ್ನು ರದ್ದುಪಡಿಸಿದೆ.

2022-23ನೇ ಮಾಹೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ನಡೆಸುವಂತೆ ವೇಳಾ ಪಟ್ಟಿಯನ್ನು ಮಂಡಲಿಯು ಪ್ರಕಟಿಸುವುದು.

ಎಸ್.ಎಸ್.ಎಲ್.ಸಿ ಪೂರ್ವ ಸಿದ್ಧತಾ ಪರೀಕ್ಷೆಗೆ ಸಂಬಂಧಿಸಿದಂತೆ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಹಂತದಲ್ಲಿ ವಾರ್ಷಿಕ ಪರೀಕ್ಷಾ ಮಾದರಿಯಲ್ಲಿ ಪ್ರಶ್ನೆ ಪತ್ರಿಕೆಗಳನ್ನು ಸಿದ್ಧಪಡಿಸಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಲಾಗಿನ್‌ಗೆ ಕಳುಹಿಸಲು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿ ಮುದ್ರಿಸಿ, ಪೂರ್ವಭಾವಿ ಪರೀಕ್ಷೆಗಳನ್ನು ನಡೆಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

ಮುಂದುವರೆದು, ಸದರಿ ಪೂರ್ವ ಸಿದ್ಧತಾ ಪರೀಕ್ಷೆಗೆ ಪ್ರತಿ ವಿದ್ಯಾರ್ಥಿಯಿಂದ ರೂ.50/- ರಂತೆ (ಐವತ್ತು ರೂಪಾಯಿ ಮಾತ್ರ) ನಿಗಧಿಪಡಿಸಿದ ಶುಲ್ಕವನ್ನು ಸಂಗ್ರಹಿಸಲು ಹಾಗೂ ವಿದ್ಯಾರ್ಥಿಗಳಿಂದ ಪಡೆದ ಪರೀಕ್ಷಾ ಶುಲ್ಕವನ್ನು ಸಂಬಂಧಿಸಿದ ಶಾಲಾ ಮುಖ್ಯೋಪಾಧ್ಯಾಯರು ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಬ್ಯಾಂಕ್ ಖಾತೆಗೆ ಜಮೆ ಮಾಡುವುದು. ಕ್ಷೇತ್ರ ಶಿಕ್ಷಣಾಧಿಕಾರಿಗಳು ಪರೀಕ್ಷಾ ಶುಲ್ಕ ಸ್ವೀಕರಿಸಿದ ಮತ್ತು ಪರೀಕ್ಷಾ ಖರ್ಚು ವೆಚ್ಚಗಳ ಕುರಿತು ಲೆಕ್ಕಪತ್ರ ನಿರ್ವಹಿಸಿ ತಪಾಸಣಾ ಸಮಯದಲ್ಲಿ ಹಾಜರುಪಡಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

V. S. 17/2/2023

**(ವಿ. ಶ್ರೀನಿವಾಸಮೂರ್ತಿ)**
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರೌಢ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ

**ಇವರಿಗೆ:**

1. ಪ್ರಧಾನ ಮಹಾ ಲೇಖಪಾಲರು – ಕರ್ನಾಟಕ (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರುಗಿ.

4. ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
5. ನಿರ್ದೇಶಕರು (ಪ್ರೌಢ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
6. ನಿರ್ದೇಶಕರು (ಪರೀಕ್ಷೆಗಳು), ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
7. ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ, ಹೊಸಕೆರೆಹಳ್ಳಿ, ಬೆಂಗಳೂರು.
8. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, ಹೊಸಕೆರೆಹಳ್ಳಿ, ಬೆಂಗಳೂರು.
9. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ (ಸಂಬಂಧಿಸಿದ ಆಯುಕ್ತರ ಮುಖಾಂತರ).
10. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ (ಸಂಬಂಧಿಸಿದ ಉಪ ನಿರ್ದೇಶಕರ ಮುಖಾಂತರ).

**ಪ್ರತಿ :-**

1. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.
3. ಸರ್ಕಾರದ ಅಪರ ಕಾರ್ಯದರ್ಶಿ (ಸೇವೆಗಳು-1) ರವರ ಆಪ್ತ ಸಹಾಯಕರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.